# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕಳಸಾ ಮತ್ತು ಬಂಡೂರಾ ನಾಲಾ ತಿರುವು ಯೋಜನೆಗಳಿಗೆ ಕೇಂದ್ರ ಸರ್ಕಾರದ ತಿರುವಳಿಗಳನ್ನು ಪಡೆಯಲು ನೋಡಲ್ ಅಧಿಕಾರಿಗಳ ನಿಯೋಜನೆ ಕುರಿತು.

***

**ಪ್ರಸ್ತಾವನೆ:**

ಮಹದಾಯಿ ನ್ಯಾಯಾಧೀಕರಣದ ತೀರ್ಪಿನ ಅನ್ವಯ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರಿನ ಪ್ರಮಾಣದಲ್ಲಿ ಕಳಸಾ ಮತ್ತು ಬಂಡೂರಾ ನಾಲಾ ತಿರುವು ಯೋಜನೆಗಳಿಗೆ ಹಂಚಿಕೆ ಆದ ನೀರಿನ ಪರಿಮಾಣಕ್ಕೆ ಈಗಾಗಲೇ ಪ್ರಾಥಮಿಕ ಪೂರ್ವ ಸಾಧ್ಯತಾ ವರದಿಗಳನ್ನು ಕೇಂದ್ರ ಜಲ ಆಯೋಗದ ಅಗತ್ಯ ತಿರುವಳಿಗೆ ಸಲ್ಲಿಸಲಾಗಿದ್ದು, ವಿವಿಧ ನಿರ್ದೇಶನಾಲಯಗಳಲ್ಲಿ ಪರಿಶೀಲನೆ ಆಗುತ್ತಿದೆ.

ದಿನಾಂಕ:16/05/2022 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸದರಿ ಯೋಜನೆಗಳಿಗೆ ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಿಗಳಿಂದ ಅಗತ್ಯ ತಿರುವಳಿ ಪಡೆಯುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳು ಹಾಗೂ ಸಂಬಂಧಿಸಿದ ವಿಷಯಗಳ ಬಗ್ಗೆ ಪರಾಮರ್ಷಿಸಲಾಯಿತು. ಯೋಜನೆಗಳಿಗೆ ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಗಳಿಂದ ನಿಗದಿತ ಕಾಲಾವಧಿಯಲ್ಲಿ ಅಗತ್ಯ ತಿರುವಳಿಗಳನ್ನು ಪಡೆಯುವ ನಿಟ್ಟಿನಲ್ಲಿ ಹೈಡ್ರಾಲಜಿ, ಕೇಂದ್ರ ಜಲ ಆಯೋಗದ ಮಾರ್ಗಸೂಚಿ ಹಾಗೂ ಯೋಜನೆಯ ಬಗ್ಗೆ ಮಾಹಿತಿ ಹೊಂದಿರುವ ಅಧಿಕಾರಿಗಳನ್ನು ಗುರುತಿಸಿ, ನೋಡಲ್ ಅಧಿಕಾರಿಗಳ ನಿರ್ಧಿಷ್ಟವಾದ ತಂಡವನ್ನು ರಚಿಸಿ, ಹಾಗೂ ಸದರಿ ಅಧಿಕಾರಿಗಳಿಗೆ ಅಗತ್ಯ ತಾಂತ್ರಿಕ ಪರಿಣಿತಿ ನೆರವು ನೀಡಲು ನಿವೃತ್ತ ಅಧಿಕಾರಿಗಳನ್ನು ನೇಮಿಸಿ ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯ ಹಾಗೂ ಇತರೆ ಸಕ್ಷಮ ಪ್ರಾಧಿಕಾರಗಳ ಅಗತ್ಯ ತಿರುವಳಿ ಪಡೆಯಲು ನವದೆಹಲಿಗೆ ನೋಡಲ್ ಅಧಿಕಾರಿಗಳ ತಂಡವನ್ನು ನಿಯೋಜಿಸಲು ನಿರ್ಧರಿಸಲಾಯಿತು. ಈ ಕುರಿತು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಇವರು ಪ್ರಸ್ತಾಪಿಸಿರುವ ನೋಡಲ್ ಅಧಿಕಾರಿಗಳ ತಂಡವನ್ನು ರಚಿಸಲು ಪರಿಶೀಲಿಸಲಾಗಿದ್ದು, ಅದರಂತೆ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 46 ಎಂಪಿಜಡ್ 2019,ಬೆಂಗಳೂರು, ದಿನಾಂಕ: 16/05/2022.**

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕಳಸಾ ಮತ್ತು ಬಂಡೂರಾ ನಾಲಾ ತಿರುವು ಯೋಜನೆಗಳ ಪ್ರಾಥಮಿಕ ಪೂರ್ವ ಸಾಧ್ಯತಾ ವರದಿ ಹಾಗೂ ವಿಸ್ತೃತ ಯೋಜನಾ ವರದಿಗಳಿಗೆ ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯ ಹಾಗೂ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅಗತ್ಯ ತಿರುವಳಿಗಳನ್ನು ಪಡೆಯುವ ಸಲುವಾಗಿ ಸದರಿ ಕಾರ್ಯವು ಪೂರ್ಣವಾಗುವವರೆಗೆ ಪೂರ್ಣಾವಧಿಗೆ ನವದೆಹಲಿಗೆ ನಿಯೋಜಿಸಲು ಈ ಕೆಳಕಂಡ ನೋಡಲ್ ಅಧಿಕಾರಿ/ಪರಿಣಿತರ ತಂಡವನ್ನು ರಚಿಸಿ ಆದೇಶಿಸಲಾಗಿದೆ.

(1) ಅಧೀಕ್ಷಕ ಅಭಿಯಂತರರು,
ಎಂ.ಎಲ್.ಬಿ.ಸಿ. ವೃತ್ತ, ಧಾರವಾಡ.

(2) ಶ್ರೀ ಶಶಿಕಾಂತ್ ಬಿ. ನಾಯಕ್,
ಕಾರ್ಯಪಾಲಕ ಅಭಿಯಂತರರು,
ಕಾರ್ಯಾಗಾರ ಮತ್ತು ಯಾಂತ್ರಿಕ ವಿಭಾಗ,
ಕರ್ನಾಟಕ ನೀರಾವರಿ ನಿಗಮ ನಿಯಮಿತ, ನವಿಲುತೀರ್ಥ.

(3) ಶ್ರೀ ಗೌರವ್ ಇ. ನಾಯಕ್,
ಸಹಾಯಕ ಇಂಜಿನಿಯರ್,
ಎಂ.ಆರ್.ಬಿ.ಸಿ. ಉಪ ವಿಭಾಗ ಸಂ.3,
ಖಾನಾಪುರ.

ಮೇಲ್ಕಂಡ ಅಧಿಕಾರಿ ವೃಂದದವರಿಗೆ ತಾಂತ್ರಿಕ ಪರಿಣಿತಿಯ ಸಹಾಯವನ್ನು ನೀಡಲು ಕೆಳಕಂಡ ಪರಿಣಿತರು:

(1) ಶ್ರೀ ಕೃಷ್ಣೋಜಿರಾವ್,
ನಿವೃತ್ತ ಅಧೀಕ್ಷಕ ಅಭಿಯಂತರರು ಹಾಗೂ
ಸಮಾಲೋಚಕರು, ಕೆ.ಎನ್.ಎನ್.ಎಲ್.

(2) ಶ್ರೀ ಶಿವರುದ್ರಪ್ಪ,
ನಿವೃತ್ತ ಕಾರ್ಯಪಾಲಕ ಅಭಿಯಂತರರು ಹಾಗೂ
ಉಪ ತಾಂತ್ರಿಕ ಸಲಹೆಗಾರರು, ಮಹಾದಾಯಿ.

ಮೇಲ್ಕಂಡ ಅಧಿಕಾರಿಗಳ ವೃಂದ ಮತ್ತು ಪರಿಣಿತರು ಒಳಗೊಂಡ ತಂಡಕ್ಕೆ ಅಗತ್ಯ ಪ್ರಯಾಣ ಹಾಗೂ ಇನ್ನಿತರೆ ಭತ್ಯೆಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಕಛೇರಿಯಿಂದ ಒದಗಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

16/5/2022
(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು. (ನಿಯೋಜಿತ ಅಧಿಕಾರಿ ವೃಂದ ಮತ್ತು ಪರಿಣಿತರು ಕೂಡಲೇ ಕಾರ್ಯಪ್ರವೃತ್ತರಾಗಲು ಅಗತ್ಯ ಸೂಚನೆಗಳನ್ನು ನೀಡಲು ಕೋರಿದೆ)
6. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, (ಅಂರಾಜ), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಮಲಪ್ರಭಾ ಯೋಜನಾ ವಲಯ, ಧಾರವಾಡ.
9. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
10. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ), ಜಲ ಸಂಪನ್ಮೂಲ ಇಲಾಖೆ.
11. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.